**ದಿನಾಂಕ: 14-06-2021 ರಂದು ಬೆಳಿಗ್ಗೆ 11-00 ಗಂಟೆಗೆ ಜಿಲ್ಲಾ ಪಂಚಾಯತ್‌ನ ಸಹ್ಯಾದ್ರಿ ಸಭಾಂಗಣದಲ್ಲಿ ಶ್ರೀ ಕೆ.ಎಸ್.ಈಶ್ವರಪ್ಪ, ಮಾನ್ಯ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರು, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸಭೆಯ ನಡವಳಿಗಳು**

ಪಂಚಾಯತ್ ರಾಜ್ ಸಲಹೆಗಾರರಾದ ಶ್ರೀ ಎಂ.ಕೆ.ಕೆಂಪೇಗೌಡರವರು ಸಭೆಯಲ್ಲಿ ಹಾಜರಿದ್ದ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರಾದ ಶ್ರೀ ಕೆ.ಎಸ್.ಈಶ್ವರಪ್ಪರವರನ್ನು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರು ಮತ್ತು ಸದಸ್ಯರುಗಳನ್ನು, ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರನ್ನು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರನ್ನು ಹಾಗೂ ಇತರರನ್ನು ಸಭೆಗೆ ಸ್ವಾಗತಿಸುತ್ತಾ, ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಸಮಿತಿಯ ಉಪಾಧ್ಯಕ್ಷರನ್ನು ಕೋರಿದರು.

ಮುಂದುವರೆದು ಮಾತನಾಡಿದ ಶ್ರೀ ಎಂ.ಕೆ.ಕೆಂಪೇಗೌಡ ರವರು, ವಿವೇಕ ಪಥ ಗ್ರಾಮ ಸ್ವರಾಜ್, ಕರ್ನಾಟಕ ಪಂಚಾಯತ್ ರಾಜ್ ಪರಿಷತ್ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಸಹಯೋಗದಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದ ಪಂಚಾಯತ್ ರಾಜ್ ವ್ಯವಸ್ಥೆ ನಿರ್ಮಾಣದಲ್ಲಿ ಅಪಾರ ಅನುಭವವಿರುವ ಗೌರವಾನ್ವಿತರಿಂದ ವಿಚಾರ ಸಂಕೀರಣ ಉಪನ್ಯಾಸಗಳನ್ನು ವೆಬ್ ನಾರ್ ನಲ್ಲಿ ನಡೆಸಲಾಗಿದ್ದು, ಸದರಿ ವಿಚಾರ ಸಂಕೀರಣದಲ್ಲಿ ವಿವಿಧ ಕ್ಷೇತ್ರಗಳ ಹಿರಿಯ ಅಧಿಕಾರಿಗಳು ಭಾಗವಹಿಸಿ, ಗ್ರಾಮ ಸ್ವರಾಜ್ ವ್ಯವಸ್ಥೆಯನ್ನು ಬಲಪಡಿಸಲು ಹಲವು ಸಲಹೆಗಳನ್ನು ನೀಡಿದ್ದಾರೆ. ಸದರಿ ಸಲಹೆಗಳನ್ನು ಸದ್ಯದಲ್ಲಿಯೇ ನಡೆಯಲಿರುವ 75ನೇ ವರ್ಷದ ಸ್ವಾತಂತ್ರ್ಯೋತ್ಸವ ಸಂದರ್ಭದಲ್ಲಿ ಸಾಕಾರಗೊಳಿಸಲು ಉದ್ದೇಶಿಸಿದ್ದು, ಸದರಿ ಸಲಹೆಗಳನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರ ಗಮನಕ್ಕೆ ತರುವ ಸಲುವಾಗಿ ಇಂದಿನ ಸಭೆಯನ್ನು ಕರೆದಿರುವುದಾಗಿ ತಿಳಿಸಿ, ಸದರಿ ಸಭೆಯನ್ನು ಆಯೋಜಿಸಿರುವುದಕ್ಕೆ ಮಾನ್ಯ ಸಚಿವರಿಗೆ ಎಲ್ಲರ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತಿರುವುದಾಗಿ ತಿಳಿಸಿದರು.

ಸಮಿತಿಯ ಉಪಾಧ್ಯಕ್ಷರಾದ ಶ್ರೀ ಪ್ರಮೋದ್ ಹೆಗಡೆಯವರು ಮಾತನಾಡಿ, ಸದರಿ ಸಭೆಯನ್ನು ಆಯೋಜಿಸುವಂತೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರು ಮತ್ತು ಸನ್ಮಾನ್ಯ ಮುಖ್ಯಮಂತ್ರಿಯವರು ತಿಳಿಸಿದ್ದರು. ಆದರೆ, ಕಾರಣಾಂತರಗಳಿಂದ ಹಾಗೂ ಕೋವಿಡ್

ಕಾರಣಗಳಿಂದ ಸದರಿ ಸಭೆಯನ್ನು ನಡೆಸಲು ಸಾಧ್ಯವಾಗಿರಲಿಲ್ಲ. ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಅಧಿಕಾರ ವಿಕೇಂದ್ರೀಕರಣವು ಅತ್ಯಂತ ಮಹತ್ವ ಪಡೆದಿದೆ ಎಂದು ತಿಳಿಸಿ, ಈ ಹಿಂದೆ ಶ್ರೀ ಎಂ.ವೈ.ಘೋರ್ಪಡೆಯವರು ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳ ಅಧ್ಯಕ್ಷರು/ಉಪಾಧ್ಯಕ್ಷರಿಗೆ ಮೀಸಲಾತಿ ನೀಡುವ ಕುರಿತು ಕಾನೂನು ರೂಪಿಸಲು ಕಾರಣಕರ್ತರಾಗಿದ್ದಾರೆ. ಅದೇ ರೀತಿ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಕಾಲ ಕಾಲಕ್ಕೆ ಮಾಡಬೇಕಾಗಿರುವ ಕೆಲಸ ಕಾರ್ಯಗಳನ್ನೂ ಸೂಚಿಸಿದ್ದಾರೆ. ಅದನ್ನು ಆಧರಿಸಿ, ದೂರದೃಷ್ಟಿ ಯೋಜನೆಗಳನ್ನು ರೂಪಿಸಬೇಕಾಗಿದೆ. ಈ ದೃಷ್ಟಿಯಿಂದ (1) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಪ್ರಕರಣ 309–ಬಿ ರನ್ವಯ ಗ್ರಾಮ ಪಂಚಾಯಿತಿಗಳು ಹೊಸದಾಗಿ ರಚನೆಯಾದ ಕೂಡಲೆ 5 ವರ್ಷಗಳ ದೂರದೃಷ್ಟಿ ಯೋಜನೆ ತಯಾರಿಸುವುದು ಕಡ್ಡಾಯವಾಗಿದ್ದು ಹಾಗೂ ಸ್ವಾತಂತ್ರ್ಯದ 75ನೇ ವರ್ಷಾಚರಣೆ ನೆನಪಿಗಾಗಿ 2021–22 ನೇ ಸಾಲಿನಿಂದ 2025–26 ನೇ ಸಾಲಿನವರೆವಿಗೆ ದೂರದೃಷ್ಟಿ ಯೋಜನೆಯನ್ನು 'ಜನರ ಯೋಜನೆ' ಎಂಬ ಹೆಸರಿನಲ್ಲಿ ಈ ಕೆಳಕಂಡ ಅಂಶಗಳನ್ನು ಒಳಗೊಂಡಂತೆ ತಯಾರಿಸಲು ಕ್ರಮ ಕೈಗೊಳ್ಳುವುದು.

- ಮಹಿಳಾ ಉದ್ದೇಶಿತ ಆಯವ್ಯಯ
- ಮಕ್ಕಳ ಉದ್ದೇಶಿತ ಆಯವ್ಯಯ
- ವಿಕಲಚೇತನರ ಉದ್ದೇಶಿತ ಆಯವ್ಯಯ
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಮೀಸಲಿಡಲಾದ ಅನುದಾನ
- ಕ್ರೀಡಾ ಚಟುವಟಿಕೆಗಳಿಗೆ ಮೀಸಲಿಡಲಾದ ಅನುದಾನ.

(2) ಗ್ರಾಮ ಪಂಚಾಯಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳು (ಕೆ.ಡಿ.ಪಿ.) ತ್ರೈಮಾಸಿಕ ಪ್ರಗತಿ ಪರಿಶೀಲನೆ ಸಭೆಗಳನ್ನು ಆಯೋಜಿಸಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನ ಇಲಾಖೆಗಳು ಯೋಜನೆ/ಕಾರ್ಯಕ್ರಮಗಳಲ್ಲಿ ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪ್ರಗತಿಯನ್ನು ಪರಾಮರ್ಶೆ ಮಾಡಲು ಕಳೆದ ಸಾಲಿನಿಂದ 16 ಇಲಾಖೆಗಳಿಗೆ ಸಂಬಂಧಿಸಿದಂತೆ ಜಂಟಿ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಇದು ಎಲ್ಲಾ ಇಲಾಖೆಗಳಿಗೂ ವಿಸ್ತರಿಸಿ ಕ್ರಮ ಕೈಗೊಳ್ಳಬೇಕು.

(3) ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ನಗರ ಮತ್ತು ಗ್ರಾಮಾಂತರ ಪ್ರದೇಶದ ಯೋಜನೆಗಳನ್ನು ಒಗ್ಗೂಡಿಸಿ ಸಮಗ್ರ ತಾಲ್ಲೂಕು ಯೋಜನೆ ಹಾಗೂ ಜಿಲ್ಲಾ ಯೋಜನೆ ತಯಾರಿಸಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಜಿಲ್ಲಾ ಯೋಜನಾ ಸಮಿತಿಗೆ ಅಧ್ಯಕ್ಷರನ್ನಾಗಿ ಜಿಲ್ಲಾ ಉಸ್ತುವಾರಿ ಸಚಿವರು ನೇಮಿಸುವುದು ಮತ್ತು ಜಿಲ್ಲಾ ಪಂಚಾಯಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಕೇಂದ್ರದ ನಗರ ಸ್ಥಳೀಯ ಸಂಸ್ಥೆಯ ಅಧ್ಯಕ್ಷರುಗಳು ಜಿಲ್ಲಾ ಯೋಜನಾ ಸಮಿತಿಯ ಸಹ–ಅಧ್ಯಕ್ಷರನ್ನಾಗಿ ನೇಮಿಸುವುದು.

(4) ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದಡಿ ಬರುವುದರಿಂದ ಪ್ರಸ್ತುತ ನಮ್ಮ ರಾಜ್ಯದಲ್ಲಿ ಕಂದಾಯ ಇಲಾಖೆಯು ನಿರ್ವಹಿಸುತ್ತಿದ್ದು, ಇದನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವರ್ಗಾಯಿಸಿ ಫಲಾನುಭವಿಗಳ ಆಯ್ಕೆ ಹಾಗೂ ಅರ್ಜಿಗಳ ಪರಿಶೀಲನೆಯನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲು ಕ್ರಮ ಕೈಗೊಳ್ಳುವುದು.

(5) ಜನನ ಮತ್ತು ಮರಣ ಹಾಗೂ ವಿವಾಹ ನೋಂದಣಿ ಕಾರ್ಯ ನೆರವೇರಿಸಲು ಗ್ರಾಮ ಪಂಚಾಯಿತಿಗಳನ್ನು ಹೆಚ್ಚುವರಿ ಕೇಂದ್ರಗಳನ್ನಾಗಿಸುವುದರಿಂದ ದೃಢೀಕರಣ ಪತ್ರ ವಿಲೇವಾರಿ, ವಿಧವೆಯರ ಪ್ರಮಾಣ ಪತ್ರ, ವೃದ್ಧಾಪ್ಯ ಪ್ರಮಾಣ ಪತ್ರ/ಜೀವ ಪ್ರಮಾಣ ಪತ್ರ, ವಾಸದ ದೃಢೀಕರಣ ಪತ್ರ ಹಾಗೂ ವಿತರಣಾ ಸೇವೆಗಳನ್ನು ಗ್ರಾಮ ಪಂಚಾಯಿತಿಯಲ್ಲಿರುವ ಬಾಪೂಜಿ ಸೇವಾ ಕೇಂದ್ರದ ಮೂಲಕ ವಿತರಿಸಲು ಅನುಮೋದನೆ ಕೋರಿದೆ. ಇದರಿಂದ ಭಾಗ್ಯಲಕ್ಷ್ಮಿ, ಮನಸ್ವಿನಿ, ಮೈತ್ರಿ, ವಿಧವಾ ವೇತನ, ಜನನಿ ಸುರಕ್ಷಾ ಯೋಜನೆ, ವಿಕಲಚೇತನರ, ಬುದ್ಧಿಮಾಂದ್ಯ ಮಕ್ಕಳಿಗೆ ಮಾಸಾಶನ, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆಗಳ ಲಾಭಗಳು ಅರ್ಹ ಫಲಾನುಭವಿಗಳಿಗೆ ಸ್ಥಳೀಯವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸುಲಭವಾಗಿ ಲಭ್ಯವಾಗುವಂತೆ ಮಾಡಲು ಕ್ರಮ ಕೈಗೊಳ್ಳುವುದು.

(6) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ರ ಅಧಿನಿಯಮ ಪ್ರಕರಣ 58 ರಲ್ಲಿ ಗ್ರಾಮ ಪಂಚಾಯಿತಿ ಪ್ರಕಾರ್ಯಗಳನ್ವಯ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ, ಮೆಟ್ರಿಕ್ ಪೂರ್ವ ಮತ್ತು ನಂತರದ ವಸತಿ ಶಾಲೆ, ವಿದ್ಯಾರ್ಥಿ ನಿಲಯಗಳು, ಆಶ್ರಮ ಶಾಲೆಗಳು, ಪಶು ಚಿಕಿತ್ಸಾಲಯ ಸೇವಾ ವಿತರಣಾ ಘಟಕ, ಪ್ರಾಥಮಿಕ ಆರೋಗ್ಯ ಕೇಂದ/ಉಪಕೇಂದ್ರ, ಅಂಗನವಾಡಿ/ಬಾಲವಾಡಿ ಕೇಂದ್ರಗಳ

ದೈನಂದಿನ ಕಾರ್ಯಚಟುವಟಿಕೆಗಳ ಮೇಲುಸ್ತುವಾರಿ ಮೇಲ್ವಿಚಾರಣೆಯನ್ನು ಗ್ರಾಮ ಪಂಚಾಯಿತಿಗಳಿಗೆ ವಹಿಸಲು ಕ್ರಮ ಕೈಗೊಳ್ಳುವುದು.

(7) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಅಧಿನಿಯಮ 2015 ರಲ್ಲಿ ಅನುಸೂಚಿ I (ಪ್ರಕರಣ 58), ಅನುಸೂಚಿ II (ಪ್ರಕರಣ 154) ಮತ್ತು ಅನುಸೂಚಿ III (ಪ್ರಕರಣ 184) ರಲ್ಲಿರುವ ಪ್ರಕಾರ್ಯಗಳನ್ವಯ ಎಲ್ಲಾ ಅನುಷ್ಠಾನ ಇಲಾಖೆಗಳಿಗೆ ಸಂಬಂಧಿಸಿದ 29 ಅಭಿವೃದ್ಧಿ ವಿಷಯಗಳು ಕಾರ್ಯಚಟುವಟಿಕೆಗಳಿಗಾಗಿ ಜವಾಬ್ದಾರಿ ನಕ್ಷೆಯನ್ನು ತಯಾರಿಸಲು ಕ್ರಮ ಕೈಗೊಳ್ಳುವುದು.

(8) ರಾಜ್ಯದಲ್ಲಿ 5600 ಗ್ರಾಮ ಪಂಚಾಯಿತಿ ಗ್ರಂಥಾಲಯಗಳನ್ನು ಜ್ಞಾನ ನಿರ್ವಹಣೆ ಜೊತೆಗೆ ಓದುವ ಬೆಳಕು ಕಾರ್ಯಕ್ರಮದಡಿ 6–18 ವರ್ಷದ ಮಕ್ಕಳನ್ನು ಉಚಿತವಾಗಿ ಸದಸ್ಯರನ್ನಾಗಿಸಿ ಹಾಗೂ ಗ್ರಂಥಾಲಯಗಳ ಸಮಯದ ಅವಧಿಯನ್ನು ದಿನಕ್ಕೆ 4 ಗಂಟೆಯಿಂದ 8 ಗಂಟೆಗೆ ಹೆಚ್ಚಿಸಲಾಗಿದೆ. ಸದರಿ ಗ್ರಂಥಾಲಯಗಳನ್ನು ಮಾಹಿತಿ ವಿಕೇಂದ್ರೀಕರಣ ಕೇಂದ್ರಗಳನ್ನಾಗಿಸಿ ರಾಜ್ಯ ಹಾಗೂ ಜಿಲ್ಲಾವಲಯ ಯೋಜನೆ/ಕಾರ್ಯಕ್ರಮಗಳ ಮಾಸ್ಟರ್ ಡೇಟಾ ಬೇಸ್ ಸೃಜಿಸಿ ಮಾಹಿತಿ ಕೇಂದ್ರಗಳನ್ನಾಗಿಸಲು ಕ್ರಮ.

(9) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 232–ಬಿ ರಂತೆ ಪ್ರತ್ಯೇಕ ಕರ್ನಾಟಕ ಪಂಚಾಯತ್ ರಾಜ್ ಆಡಳಿತಾತ್ಮಕ ಸೇವೆ ಸ್ಥಾಪನೆಗೊಳಿಸಲು ಕ್ರಮ.

(10) ಪ್ರತಿ ಗ್ರಾಮಗಳಲ್ಲಿ ಗ್ರಾಮ ಠಾಣಾದ ಹೊರಗಡೆ ಬಹಳಷ್ಟು ಜನರು ಮನೆಗಳನ್ನು ನಿರ್ಮಿಸಿಕೊಂಡಿರುವ ಹಿನ್ನಲೆಯಲ್ಲಿ ಮತ್ತು ಅವರ ಆಸ್ತಿಗೆ ಒಡೆತನದ ದಾಖಲೆಗಳು ಲಭ್ಯವಿಲ್ಲದೆ ಇರುವುದರಿಂದ ಅವರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ ಇದನ್ನು ನಿವಾರಿಸಲು ಕ್ರಮ. ತಮ್ಮ ಅಧ್ಯಕ್ಷತೆಯಲ್ಲಿ ಮಂತ್ರಿಮಂಡಲದ ಉಪಸಮಿತಿಯು ಇ–ಸ್ವತ್ತು ಸಮಸ್ಯೆ ನಿವಾಹರಣೆಗೆ ಕಾರ್ಯನಿರ್ವಹಿಸುತ್ತಿದ್ದು ಮೊದಲ ಆದ್ಯತೆಯಾಗಿ ಗ್ರಾಮ ಠಾಣಾ ವ್ಯಾಪ್ತಿ ವಿಸ್ತರಣೆ ಮಾಡುವುದು. ಇದರಿಂದ ಗ್ರಾಮ ಪಂಚಾಯಿತಿಗಳು ತೆರಿಗೆ ಸಂಪನ್ಮೂಲ ಹೆಚ್ಚಿಸಿಕೊಳ್ಳಲು ಅವಕಾಶ ಸಿಗಲಿದೆ.

(11) ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಡಿ.ಡಿ.ಓ ಗಳನ್ನಾಗಿಸಿ ಖಜಾನೆ–2 ರಲ್ಲಿ ಸೆಳೆಯುವ ಅನುದಾನದ ಮಾಹಿತಿಯನ್ನು ಅವಲೋಕನ ತಂತ್ರಾಂಶದಲ್ಲಿ ಅಳವಡಿಸಿ ಮೂರು ಸ್ತರದ ಪಂಚಾಯಿತಿಗಳ ವೆಚ್ಚದ ಸಂಪೂರ್ಣ ಮಾಹಿತಿಯನ್ನು ಪಾರದರ್ಶಕವಾಗಿ ವಿಕೇಂದ್ರೀಕರಣಗೊಳಿಸಲು ಕ್ರಮ ಕೈಗೊಳ್ಳುವುದು.

(12) ಗ್ರಾಮ ಸಭೆಗಳನ್ನು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಅನುಸೂಚಿತ ಜಾತಿ/ಪಂಗಡ ಜನರ ಗ್ರಾಮ ಸಭೆ, ಮಹಿಳಾ ಗ್ರಾಮ ಸಭೆ, ಮಕ್ಕಳ ಗ್ರಾಮ ಸಭೆಗಳು ಕಾಲಕಾಲಕ್ಕೆ ನಿಗದಿತ ಸಮಯದಲ್ಲಿ ಪಾರದರ್ಶಕವಾಗಿ ಮತ್ತು ಸಮಾನತೆಯಿಂದ ಕೂಡಿದ ಸಭೆಗಳನ್ನು ನಡೆಸಲು ಕ್ರಮ ಕೈಗೊಳ್ಳಬೇಕು. ಈ ಕಾರ್ಯಕ್ಕೆ ಪ್ರಸ್ತುತ ಲಭ್ಯವಿರುವ ವ್ಯಾಟ್ಸ್‌ಆಪ್, ಫೇಸ್‌ಬುಕ್ ಹಾಗೂ ಯೂಟೂಬ್ ಚಾನಲ್‌ಗಳನ್ನು ಪ್ರಚಾರಕ್ಕಾಗಿ ಬಳಸಿಕೊಳ್ಳಲು ಕ್ರಮ.

(13) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಹಿಂದೆ ಗ್ರಾಮ ಸ್ವರಾಜ್ ಟಿ.ವಿ. ಚಾನಲ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿತ್ತು. ಆದರೆ ಕಾರಣಾಂತರಗಳಿಂದ ಪ್ರಕ್ರಿಯೆ ನಿಂತು ಹೋಗಿದ್ದು ಇದಕ್ಕೆ ಮರುಚಾಲನೆ ನೀಡಲು ಕ್ರಮ ಕೈಗೊಳ್ಳವುದು.

(14) ಗ್ರಾಮ ಪಂಚಾಯತ್ ಆಯವ್ಯಯ 2019–20 ರಿಂದ ಪ್ರಸುತ್ತ ಸಾಲಿನವರೆಗೆ 8 ಯೋಜನೆಗಳಿಗೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವೆಬ್‌ಸೈಟ್‌ನಲ್ಲಿ ಲಭ್ಯಗೊಳಿಸಲಾಗಿದೆ. ಇತರೆ ಅನುಷ್ಠಾನ ಇಲಾಖೆಗಳಿಗೆ ಸಂಬಂಧಿಸಿದಂತೆ ಆಯವ್ಯಯ ಮಾಹಿತಿಯನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಇದರಿಂದ ಗ್ರಾಮ ಪಂಚಾಯಿತಿಗಳಿಗೆ ಸಂಪೂರ್ಣ ಸಂಪನ್ಮೂಲ ಹೊದಿಕೆಗಳ (Resource Envelope) ಮಾಹಿತಿಯನ್ನು ಒದಗಿಸಲು ಸಾಧ್ಯವಾಗುವುದು.

(15) ರಾಜ್ಯವಲಯ ಯೋಜನೆಗಳಲ್ಲಿ ಕಾರ್ಯ ಸಾಧ್ಯವಾಗುವ ಯೋಜನೆಗಳನ್ನು ಜಿಲ್ಲಾ ವಲಯಗಳಿಗೆ ವರ್ಗಾಯಿಸಲು ಕ್ರಮ ಕೈಗೊಳ್ಳಬೇಕು.

(16) ಪಂಚಾಯತ್ ರಾಜ್ ಸಂಸ್ಥೆಗಳ ಆಡಳಿತ ಸುಸಲಿತವಾಗಿ ನಡೆಸಲು ಅನುವಾಗಲು ಚುನಾಯಿತ ಪ್ರತಿನಿಧಿಗಳಿಗೆ ಶಿಷ್ಟಾಚಾರ ಸಂಹಿತೆ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಕಡತ ನಿರ್ವಹಣೆ ಹಾಗೂ ಇ–ಆಡಳಿತ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕು.

(17) ಪ್ರಾದೇಶಿಕ ಅಸಮತೋಲನಾ ನಿವಾರಣೆಗಾಗಿ ರಾಜ್ಯವಲಯದಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ಅನುದಾನವನ್ನು ಒದಗಿಸಲಾಗುತ್ತಿದ್ದು, ಇದನ್ನು ರಾಜ್ಯವಲಯದಿಂದ ಜಿಲ್ಲಾವಲಯಕ್ಕೆ ವರ್ಗಾವಣೆ ಮಾಡಲು ಕ್ರಮ ಕೈಗೊಳ್ಳಬೇಕು. ಇದರಿಂದ ಈ ತಾಲ್ಲೂಕುಗಳನ್ನು ಡಾ॥ ನಂಜುಂಡಪ್ಪ ವರದಿಯಲ್ಲಿ ಅನುಸರಿಸಿರುವ ಮಾನದಂಡಗಳನ್ವಯ ಗುರುತಿಸಿ, ಪರಿಶೀಲಿಸಿ ಹಾಗೂ ಆದ್ಯತೆ ನೀಡಿ ಅನುದಾನ ಹಂಚಿಕೆ ಮಾಡಲು ಸಾಧ್ಯವಾಗಲಿದೆ.

(18) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಪ್ರಕರಣ 3ಇ, ಪ್ರಕರಣ 309 ರಿಂದ 310ಬಿ ರವರೆಗೆ ನಿಯಮಗಳನ್ನು ರೂಪಿಸಲು ಕ್ರಮ ಕೈಗೊಳ್ಳಬೇಕು.

(19) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 206 (2) ರನ್ವಯ ಶೇಕಡ 20 ರಷ್ಟು ಮುಕ್ತ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲು ಕ್ರಮ ಕೈಗೊಳ್ಳಬೇಕು.

(20) ಜನರ ಜೀವನ ಮಟ್ಟ ಸುಧಾರಣೆ ಮಾಡಲು ಸರ್ವಕುಟುಂಬ ಸಮೀಕ್ಷೆ ನಡೆಸಲು ಕ್ರಮ ವಹಿಸಬೇಕು.

(21) ಗ್ರಾಮೀಣ ಕುಟುಂಬಗಳ ಆದಾಯ ಹೆಚ್ಚಿಸಲು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಗಳ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಕೃಷಿ, ಹೈನುಗಾರಿಕೆ, ತೊಟಗಾರಿಕೆ ಜೊತೆಗೆ ಪರ್ಯಾಯ ಆರ್ಥಿಕ ಚಟುವಟಿಕೆಗಳಾದ ಪ್ಲಂಬಿಂಗ್ ಕೆಲಸ, ಗಾರೆ, ಬಾರ್ ಬೆಡಿಂಗ್ ಕೆಲಸ, ಎಲೆಕ್ಟ್ರಿಕಲ್ ಕೆಲಸ, ಮರಗೆಲಸ ಇತ್ಯಾದಿಗಳನ್ನು ಗುರುತಿಸಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲು ಕ್ರಮ ಕೈಗೊಳ್ಳಬೇಕು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಥವಾ ಎರಡು/ಮೂರು ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗುಡಿ ಕೈಗಾರಿಕೆ/ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು ಸಾಧ್ಯವಾಗುವುದರಿಂದ ಹೊರ ರಾಜ್ಯ ನುರಿತ ಕೆಲಸಗಾರರ ಮೇಲೆ ಅವಲಂಬಿತವಾಗುವುದು ಕಡಿಮೆಯಾಗಿ ಸ್ಥಳೀಯ ಜನರಿಗೆ ಹೆಚ್ಚು ಉದ್ಯೋಗ ಸೃಷ್ಟಿಯಾಗುವುದು.

(22) ಗ್ರಾಮ ಪಂಚಾಯಿತಿಗಳು ಸ್ಥಳೀಯ ಆದಾಯದ ಸಾಮಾರ್ಥ್ಯವನ್ನು ಹೆಚ್ಚಿಸಲು ಹೊಸದಾಗಿ ಆಸ್ತಿಗಳನ್ನು ಮೌಲ್ಯಮಾಪನ ಮಾಡಿ ಪರಿಷ್ಕೃತ ಆಸ್ತಿ ತೆರಿಗೆ ವಿಧಿಸುವುದು ಮತ್ತು ಹೊಸ ಆಸ್ತಿಗಳ ಸೇರ್ಪಡೆಗೆ ಅವಕಾಶ ಕಲ್ಪಿಸಿದಲ್ಲಿ ಗ್ರಾಮ ಪಂಚಾಯಿತಿಯ ಸ್ವಂತ ಸಂಪನ್ಮೂಲ ಆದಾಯ ಕ್ರೋಢೀಕರಣ ಹೆಚ್ಚಾಗಿ ಗ್ರಾಮ ಪಂಚಾಯಿತಿಗಳು ಅನುದಾನಗಳ ಮೇಲೆ ಅವಲಂಭಿತವಾಗುವುದು ಕಡಿಮೆಯಾಗುವುದರಿಂದ ಇದನ್ನು ಜಾರಿಗೊಳಿಸಬೇಕು.

(23) 2025 ನೇ ಸಾಲಿನಲ್ಲಿ ಗ್ರಾಮ ಪಂಚಾಯಿತಿ ಚುನಾವಣೆಯು ಏಕ ಸದಸ್ಯ ಮತಕ್ಷೇತ್ರದಡಿ ನಡೆಯಬೇಕು ಇದನ್ನು ಜಾರಿಗೆ ತರಬೇಕು.

(24) ಗ್ರಾಮ ಪಂಚಾಯಿತಿಗಳಲ್ಲಿ ಭ್ರಷ್ಟಾಚಾರ ತಡೆಯಲು ಚುನಾವಣೆ ಮುನ್ನವೇ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಮೀಸಲಾತಿ ಪ್ರಕಟಿಸಿ ಚುನಾವಣೆ ಫಲಿತಾಂಶ ಪ್ರಕಟವಾದ ದಿನವೇ ಆಯ್ಕೆ ಮಾಡಬೇಕು.

(25) ಗ್ರಾಮೀಣ ಪ್ರದೇಶದಲ್ಲಿ ನೀರಿನ ಬಳಕೆಯನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಲು ನೀರು ನಿರ್ವಹಣೆ ವ್ಯವಸ್ಥೆಯನ್ನು ಜಾರಿಗೆ ತರಬೇಕು.

(26) ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 79 ರನ್ವಯ 5-6 ಗ್ರಾಮ ಪಂಚಾಯತಿಗಳು ಒಟ್ಟುಗೂಡಿ ಒಡಂಬಡಿಕೆ ಮಾಡಿಕೊಂಡು ಪ್ರತಿ ಜಿಲ್ಲಾ ಪಂಚಾಯತ್ ಮತಕ್ಷೇತ್ರದಲ್ಲಿ ಒಂದು ಬಹು ಗ್ರಾಮ ಪಂಚಾಯಿತಿ ಘನ ತಾಜ್ಯ ಘಟಕ ಸ್ಥಾಪಿಸಲು ಕ್ರಮಕೈಗೊಳ್ಳಬೇಕು.

(27) ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರಚಿಸಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಪರಸ್ಪರ ಸಮಾಲೋಚನೆ/ ಸಮನ್ವಯ ಮೂಲಕ ಸ್ಥಳೀಯ ಸರ್ಕಾರಗಳು ತಳಮಟ್ಟದಿಂದ ಯೋಜನೆ/ಕಾರ್ಯಕ್ರಮಗಳನ್ನು ಸಂಯೋಜಿಸಿ ಮುಂದಿನ ಹಂತವಾದ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಅಲ್ಲಿಂದ ಜಿಲ್ಲಾ ಯೋಜನೆ ಸಮಿತಿಗೆ ಹಾಗೂ ಜಿಲ್ಲಾ ಯೋಜನೆ ಸಮಿತಿಯಿಂದ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಗೆ ಸಲ್ಲಿಸಲು ಮೇಲ್ವಿಚಾರಣೆ ಹಾಗೂ ಉಸ್ತುವಾರಿಯನ್ನು ಸಮಿತಿಗೆ ವಹಿಸಲು ಕ್ರಮ ಕೈಗೊಳ್ಳುವುದು.

(28) ಪಂಚಾಯತ್ ರಾಜ್ ಸಂಸ್ಥೆಗಳ ವಾಸ್ತವ ಸ್ಥಿತಿಗತಿ / ಸಾಧನೆ ಕುರಿತು Devolution and Performance Index Report for PRIs in Karnataka ಅಧ್ಯಯನ ವರದಿಯು ನೀಡುವ ಸೂಚ್ಯಾಂಕಗಳ ಆಧಾರದ ಮೇಲೆ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳನ್ನು ಶ್ರೇಣಿ ಮೂಲಕ ವರ್ಗೀಕರಿಸಿ ಪ್ರತಿಯೊಂದು ಗ್ರಾಮ ಪಂಚಾಯಿತಿಯು ವಿಕೇಂದ್ರೀಕರಣ ಸೂಚ್ಯಾಂಕ 0.75 ಕ್ಕಿಂತ ಹೆಚ್ಚು ಪ್ರಗತಿಯನ್ನು ಸಾಧಿಸಲು ಕ್ರಮ ಕೈಗೊಳ್ಳುವುದು.

(29) 4ನೇ ರಾಜ್ಯ ಹಣಕಾಸು ಆಯೋಗವು ಸಾಮರ್ಥ್ಯಾಭಿವೃದ್ಧಿಗಾಗಿ ರೂ.2 ಕೋಟಿಗಳನ್ನು ವಾರ್ಷಿಕವಾಗಿ ನೀಡಲು ಶಿಫಾರಸ್ಸು ಮಾಡಿದ್ದು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಮತ್ತು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಜಂಟಿಯಾಗಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಮತ್ತು ಜಿಲ್ಲಾ ಯೋಜನಾ ಸಮಿತಿ ಸದಸ್ಯರುಗಳಿಗೆ ತರಬೇತಿ ನೀಡಿ ಸಾಮರ್ಥ್ಯಾಭಿವೃದ್ಧಿಗೊಳಿಸಲು ಈ ಹಣವನ್ನು ಬಳಸಲು ಉದ್ದೇಶಿಸಲಾಗಿದ್ದು ಇದಕ್ಕೆ ಕ್ರಮ ಕೈಗೊಳ್ಳುವವ ಕುರಿತು ಸಮಿತಿಯು ಶಿಫಾರಸ್ಸು ಮಾಡಿದ್ದು, ಸದರಿ ಸಮಿತಿಯ ಶಿಫಾರಸ್ಸನ್ನು ತಕ್ಷಣವೇ ಜಾರಿಗೆ ತರುವಂತೆ ಕೋರಿದರು.

ಸಮಿತಿಯ ಸದಸ್ಯರಾದ ಶ್ರೀ ಡಿ.ಆರ್.ಪಾಟೀಲ್‌ರವರು ಮಾತನಾಡಿ, ತಾವು 1987 ರಿಂದ 1097 ರವರೆಗೆ ಐದು ವರ್ಷದ ಅವದಿಯಲ್ಲಿ ಜಿಲ್ಲಾ ಪಂಚಾಯತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದು, ಈ ಅವಧಿಯಲ್ಲಿ ಪಂಚಾಯತ್ ರಾಜ್ ಕಾಯ್ದೆಗೆ 73ನೇ ತಿದ್ದುಪಡಿಯಾಗಿರುತ್ತದೆ. ಆ ನಂತರದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ವತಿಯಿಂದ ಕೆಲವು ಪರಿಣಾಮಕಾರಿ ಸಲಹೆಗಳನ್ನು ನೀಡಿದ್ದು, ಸದರಿ ಸಲಹೆಗಳನ್ನು ಭಾರತದ 75ನೇ ವರ್ಷದ ಸ್ವಾತಂತ್ರ್ಯ ಅಮೃತ ಮಹೋತ್ಸವದ ಆಚರಣೆಯ ಸವಿ ನೆನಪಿಗಾಗಿ ರಾಜ್ಯದಲ್ಲಿ ಗ್ರಾಮ ಸ್ವರಾಜ್ ಬಲವರ್ಧನೆ ಮಾಡುವ ಸಲುವಾಗಿ ಜಾರಿಗೆ ತರುವಂತೆ ಕೋರಿದರು.

ಶ್ರೀ ವಿ.ವೈ.ಘೋರ್ಪಡೆಯವರು ಮಾತನಾಡಿ, ಗ್ರಾಮ ಸ್ವರಾಜ್ ಬಲವರ್ಧನೆ ಮಾಡುವ ಕನಸು ನನಸಾಗಬೇಕಾದಲ್ಲಿ ಮುಂಬರುವ ಚುನಾವಣೆಗಳಲ್ಲಿ ಎಲ್ಲರಿಗೂ ಸಾಮಾಜಿಕ ನ್ಯಾಯ ದೊರೆಯುವಂತಾಗಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಎಲ್ಲರೂ ಕಡ್ಡಾಯವಾಗಿ ಶೌಚಾಲಯ ಬಳಕೆ ಮಾಡುವಂತಾಗಬೇಕು. ಇದಕ್ಕೆ ಸಹಕಾರಿಯಾಗಿ ನೀರಿನ ಸಂಪರ್ಕ ಕಲ್ಪಿಸಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಮಹಿಳಾ ಗ್ರಾಮ ಸಭೆಗಳು/ಮಕ್ಕಳ ಗ್ರಾಮ ಸಭೆಗಳು/ಪ.ಜಾತಿ/ಪ.ವರ್ಗದವರ ಗ್ರಾಮ ಸಭೆ ನಡೆಯಬೇಕು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಡೆಯುವ ಅಧ್ಯಕ್ಷರ/ಉಪಾಧ್ಯಕ್ಷರ ಚುನಾವಣೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭ್ರಷ್ಟಾಚಾರ ನಡೆಯುತ್ತಿದ್ದು, ಇದನ್ನು ತಡೆಯುವ ಸಲುವಾಗಿ ಗ್ರಾಮ ಪಂಚಾಯಿತಿ ಸದಸ್ಯರ ಚುನಾವಣೆ ನಡೆಯುವ ಮಾರನೆಯ ದಿನವೇ ಅಧ್ಯಕ್ಷ/ಉಪಾಧ್ಯಕ್ಷರ ಚುನಾವಣೆ ನಡೆಸುವಂತೆ ಸಲಹೆ ನೀಡಿದರು. ಈಗಾಗಲೇ Devolution and Performance Index Report for PRIs in Karnataka ಅಧ್ಯಯನ ಕೈಗೊಳ್ಳಲಾಗಿದ್ದು, ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿಗಳ ಸಾಧನೆಯು ವಿಕೇಂದ್ರೀಕರಣ ಸೂಚ್ಯಾಂಕದ 0.75 ಪಾಯಿಂಟ್‌ಗಳಿರಬೇಕು ಮತ್ತು Performance Index ಆಧಾರದ ಸಾಧನೆ ಮೇಲೆ ಮೌಲ್ಯಮಾಪನ ಮಾಡಬೇಕೆಂದು ತಿಳಿಸಿದರು. ಗ್ರಾಮೀಣ ಜನರ ಜೀವನಮಟ್ಟ ಸುಧಾರಣೆ ಮಾಡಲು ಸರ್ವಕುಟುಂಬ ಸಮೀಕ್ಷೆ ಮಾಡುವುದು ಸೂಕ್ತ ಎಂದು ತಿಳಿಸಿದರು. ಗ್ರಾಮ ಪಂಚಾಯಿತಿಗಳಿಗೆ ರಾಜ್ಯ ಮತ್ತು ಜಿಲ್ಲಾವಲಯ ಯೋಜನೆಗಳಿಗೆ ಸಂಬಂಧಿಸಿದಂತೆ ಸಂಪನ್ಮೂಲ ಹೊದಿಕೆ (Resource Envelope) ಮಾಹಿತಿಯನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಬೇಕೆಂದು ಕೋರಿದರು.

ಸಮಿತಿಯ ಸದಸ್ಯರಾದ ಶ್ರೀ ಸಿ.ನಾರಾಯಣಸ್ವಾಮಿ ರವರು ಮಾತನಾಡಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆ 1993 ಅಧಿನಿಯಮ 2015 ಪ್ರಕರಣ 296–ಎ ಕುಂದು ಕೊರತೆ

ನಿವಾರಣಾ ಪ್ರಾಧಿಕಾರ ಎಲ್ಲಾ ಜಿಲ್ಲೆಗಳಲ್ಲೂ ಸ್ಥಾಪಿಸಬೇಕೆಂದು ಸಭೆಯಲ್ಲಿ ಕೋರಿದರು. ಕರ್ನಾಟಕ ರಾಜ್ಯದಲ್ಲಿ ಮಳೆ ನೀರು ಸಂಗ್ರಹಣೆಯೂ ಸೇರಿದಂತೆ ನೀರಾವರಿ ಹಾಗೂ ಗೃಹ ಮತ್ತು ಕೈಗಾರಿಕೆ ನೀರು ಬಳಕೆ ಮತ್ತು ನಿರ್ವಹಣೆ ನೀತಿಯನ್ನು ರೂಪಿಸಬೇಕು. ಈ ಬಗ್ಗೆ ಯುವಜನತೆಯಲ್ಲಿ ಅರಿವು ಮೂಡಿಸುವ ಸಲುವಾಗಿ ಈ ಯೋಜನೆಯ ಬಗ್ಗೆ ಶಾಲೆ / ಕಾಲೇಜುಗಳ ಪಠ್ಯಕ್ರಮದಲ್ಲಿ ಈ ವಿಷಯವನ್ನು ಅಳವಡಿಸಬೇಕೆಂದು ಅಂತರರಾಷ್ಟ್ರೀಯ ಖ್ಯಾತಿಯ ಶ್ರೀ ರಾಜೇಂದ್ರಸಿಂಗ್ ರವರು ಸಲಹೆ ನೀಡಿರುತ್ತಾರೆ. ಈಗಾಗಲೇ ರಾಜ್ಯಸ್ಥಾನದಲ್ಲಿ ಅಮೂಲಾಗ್ರವಾಗಿ ಜಾರಿಗೊಳಿಸಿ ಯಶಸ್ವಿಯಾಗಿದೆ ಎಂದು ತಿಳಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದಲ್ಲೂ ನೀರು ಬಳಕೆ ಹಾಗೂ ನಿರ್ವಹಣಾ ನೀತಿಯನ್ನು ರೂಪಿಸಬೇಕೆಂದು ಮಾನ್ಯ ಸಚಿವರಲ್ಲಿ ಕೋರಿದರು.

ಶ್ರೀ ಶಿವರಾಜ್‌ರವರು ಮಾತನಾಡಿ, ಸಮಿತಿಯ ಉಪಾಧ್ಯಕ್ಷರು ಪ್ರಸ್ತುಪಡಿಸಿದ ಎಲ್ಲಾ ಅಂಶಗಳನ್ನು ಪರಿಗಣಿಸಬೇಕು ಎಂದು ಸಭೆಯಲ್ಲಿ ಕೋರಿ, ನೆರೆಯ ರಾಜ್ಯಗಳಾದ ಕೇರಳ, ತಮಿಳುನಾಡು ರಾಜ್ಯಗಳಲ್ಲಿ ಜಾರಿಗೆ ತಂದಿರುವ ಮಾದರಿಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆಯನ್ನು ಜಾರಿಗೆ ತರುವುದು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕುಟುಂಬಗಳ ಉಳಿವಿಗಾಗಿ ಮದ್ಯಪಾನವನ್ನು ಕಡ್ಡಾಯವಾಗಿ ನಿಷೇಧಿಸಬೇಕು. ಈ ಮೂಲಕ ಮಹಾತ್ಮಗಾಂಧಿಯವರ ಕನಸನ್ನು ನನಸಾಗಿಸಲು ಸಾಧ್ಯ ಎಂದರು.

ಸದಸ್ಯರಾದ ಶ್ರೀ ಡಿ.ಆರ್.ಪಾಟೀಲ್‌ರವರು ಮಾತನಾಡಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯಿದೆಯನ್ವಯ ಶೇಕಡಾ 20 ರಷ್ಟು ಮುಕ್ತ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಬೇಕು. ಅನುಸೂಚಿತ ಜಾತಿ/ಪಂಗಡ ಜನರ ಗ್ರಾಮ ಸಭೆ, ಮಹಿಳಾ ಗ್ರಾಮ ಸಭೆ, ಮಕ್ಕಳ ಗ್ರಾಮ ಸಭೆಗಳು ಕಾಲಕಾಲಕ್ಕೆ ನಿಗದಿತ ಸಮಯದಲ್ಲಿ ಪಾರದರ್ಶಕವಾಗಿ ನಡೆಸಬೇಕು. ಪ್ರತಿ ಜಿಲ್ಲಾ ಪಂಚಾಯತ್ ಮತಕ್ಷೇತ್ರದಲ್ಲಿ ಒಂದು ಬಹು ಗ್ರಾಮ ಪಂಚಾಯಿತಿ ಘನ ತಾಜ್ಯ ಘಟಕ ಸ್ಥಾಪಿಸಲು ಕ್ರಮ ಕೈಗೊಳ್ಳಬೇಕು ಎಂದರು. ಜನವಸತಿ / ವಾರ್ಡ್ / ಗ್ರಾಮ ಸಭೆಗಳ ಮೂಲಕ ತಳಮಟ್ಟದಿಂದ ಯೋಜನೆಗಳನ್ನು ರೂಪಿಸಿ ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಜಿಲ್ಲಾ ಯೋಜನಾ ಸಮಿತಿ ಹಾಗೂ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಮೂಲಕ ರಾಜ್ಯ ಯೋಜನೆಯಲ್ಲಿ ಸೇರ್ಪಡೆಗೊಳ್ಳಬೇಕು. ಆದುದರಿಂದ, ಜಿಲ್ಲಾ ಯೋಜನಾ ಸಮಿತಿಗೆ ಜಿಲ್ಲೆಯ ಉಸ್ತುವಾರಿ ಸಚಿವರು ಅಧ್ಯಕ್ಷರಾಗಬೇಕು, ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಸಚಿವರಲ್ಲಿ ಕೋರಿದರು.

ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ಮಾತನಾಡಿ, ಗ್ರಾಮೀಣಾಭಿವೃದ್ಧಿಗೆ ಹೊಸ ರೂಪು ನೀಡುವ ಸಲುವಾಗಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಹಲವಾರು ಸಲಹೆ-ಸೂಚನೆಗಳನ್ನು ನೀಡಿದ್ದು, ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿತವಾದ ಸಲಹೆಗಳಿಗೆ ಕ್ರಮ ಕೈಗೊಳ್ಳಲು ಸರ್ಕಾರದ ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗಿದೆ. ಸದರಿ ಸಭೆಯಲ್ಲಿ ಮಂಡಿಸಿದ ಉಳಿದ ಸಲಹೆಗಳ ಅನುಷ್ಠಾನದ ಕುರಿತು ಮಾನ್ಯ ಸಚಿವರು ಹಾಗೂ ಮಾನ್ಯ ಮುಖ್ಯಮಂತ್ರಿಗಳ ಜೊತೆ ಚರ್ಚಿಸಬೇಕಾಗಿದೆ ಎಂದು ತಿಳಿಸಿದರು.

ಮುಂದುವರೆದು, ಏಪ್ರಿಲ್-5 ಮತ್ತು 6 ರಂದು ಗ್ರಾಮೀಣಾಭಿವೃದ್ಧಿ ಕುರಿತ ಒಂದು ಕಾರ್ಯಗಾರವನ್ನು ಬೆಂಗಳೂರಿನಲ್ಲಿ ನಡೆಸಲಾಗಿದ್ದು, ಈ ಕಾರ್ಯಗಾರಕ್ಕೆ ಎಲ್ಲಾ ಇಲಾಖೆಗಳ ಪ್ರತಿನಿಧಿಗಳು ಭಾಗವಹಿಸಿದ್ದರೆಂಬುದಾಗಿ ಸಭೆಯ ಗಮನಕ್ಕೆ ತಂದರು. ಈಗಾಗಲೇ ತಹಶೀಲ್ದಾರ್‌ರನ್ನು ತಾಲ್ಲೂಕು ಯೋಜನಾ ಸಮಿತಿಯಲ್ಲಿ ಸೇರಿಸಿಕೊಳ್ಳಲು ಸರ್ಕಾರಿ ಆದೇಶ ಹೊರಡಿಸಲಾಗಿದ್ದು, ಮುಂದಿನ ತಿದ್ದುಪಡಿಗೆ ಅವಕಾಶ ಬಂದಾಗ ಆ ತಿದ್ದುಪಡಿಯಲ್ಲಿ ಸಹಾ ಸೇರಿಸಿಕೊಳ್ಳಲಾಗುವುದಾಗಿ ತಿಳಿಸಿದರು. ಈ ಸಮಿತಿಯಲ್ಲಿ ಚರ್ಚಿಸಿದ ವಿಷಯಗಳನ್ನು ಪರಿಗಣಿಸಲಾಗುವುದಾಗಿ ಸಭೆಯ ಗಮನಕ್ಕೆ ತಂದರು. ಪ್ರಸಕ್ತ ವರ್ಷದಲ್ಲಿ ಕೋವಿಡ್-19ನ ಎರಡನೇ ಅಲೆ ಪ್ರಾರಂಭವಾಗಿದ್ದರಿಂದ ಸ್ಕೀಂ ಪ್ರೋಗ್ರಾಮ್ ವಿಳಂಬವಾಗಿದ್ದುದ್ದಾಗಿ ಸಭೆಯ ಗಮನಕ್ಕೆ ತಂದರು. ಮೊದಲನೆಯದಾಗಿ 5 ವರ್ಷಗಳ ಸಮಗ್ರವಾದ ದೂರದೃಷ್ಟಿ ಯೋಜನೆಯನ್ನು ಮಾಡಿ, ಆಯಾಯ ವರ್ಷ ಲಭ್ಯವಾಗುವ ಅನುದಾನವನ್ನು ಆದ್ಯತೆಯನುಸಾರ ಬಳಸುವಂತೆ ಮಾಡಬೇಕಾಗಿದೆ. ಎರಡನೆಯದಾಗಿ ಮೈಕ್ರೋ ಪ್ಲಾನ್ ಮಾಡಿ ತಮಿಳುನಾಡು ಮತ್ತು ಕೇರಳ ರಾಜ್ಯದಲ್ಲಿ ಅನುಸರಿಸುತ್ತಿರುವ ರೀತಿಗಳನ್ನು ಕ್ರೋಢೀಕರಿಸಿಕೊಂಡು ರಾಜ್ಯದ ಮನೆ ಇಲ್ಲದ ಕಡು ಬಡವರಿಗೆ ಮನೆ ಒದಗಿಸುವುದು, ಸಫಾಯಿ ಕರ್ಮಚಾರಿಗಳು, ಬಾಲ ಕಾರ್ಮಿಕರು ಹಾಗೂ ಇತರೆ ಬಡವರಿಗೆ ಆದ್ಯತೆ ಮೇರೆಗೆ ಸೌಕರ್ಯ ಒದಗಿಸುವ ಕುರಿತು ಕ್ರಮ ಕೈಗೊಳ್ಳಬಹುದಾಗಿದೆ ಎಂದು ಸಭೆಯ ಗಮನಕ್ಕೆ ತಂದರು. ಪ್ರತಿ ವರ್ಷ ಜುಲೈನಲ್ಲಿ ಕ್ರಿಯಾ ಯೋಜನೆ ತಯಾರಿಸಲಾಗುತ್ತಿರುವುದಾಗಿ ಸಭೆಯ ಗಮನಕ್ಕೆ ತಂದರು.

ಮುಂದುವರೆದು, ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರು ಮಾತನಾಡುತ್ತಾ, ಸಮಿತಿಯ ಸಲಹೆಯಂತೆ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಯ್ಕೆಯನ್ನು ಚುನಾವಣೆ ಫಲಿತಾಂಶ ಪ್ರಕಟವಾದ ದಿನವೇ ಅಥವಾ ನಂತರದ ದಿನವೇ ಪ್ರಕಟಿಸುವ ಕುರಿತು ಪರಿಶೀಲಿಸುವುದಾಗಿ ಸಭೆಯ ಗಮನಕ್ಕೆ ತಂದರು.

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರು ಮಾತನಾಡುತ್ತಾ, ಕರ್ನಾಟಕ ರಾಜ್ಯ ವಿಕೇಂದ್ರಿಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯು ಸಲ್ಲಿಸಿರುವ ಪ್ರಮುಖಾಂಶಗಳ ಪೈಕಿ ಕೆಲವು ಈಗಾಗಲೇ ಅನುಷ್ಠಾನಗೊಳಿಸಲು ಕ್ರಮ ಕೈಗೊಂಡಿರುವುದಾಗಿ ತಿಳಿಸುತ್ತಾ, ಇನ್ನೂ ಹಲವು ಅಂಶಗಳು ಅನುಷ್ಠಾನಗೊಳ್ಳಬೇಕಾಗಿರುವುದಾಗಿ ತಿಳಿಸಿದರು. ಈ ಹಿನ್ನೆಲೆಯಲ್ಲಿ ಎರಡು ದಿನಗಳನ್ನು ಈ ವಿಷಯಗಳ ಅನುಷ್ಠಾನದ ಬಗ್ಗೆ ಚರ್ಚಿಸಲು ಕಾಯ್ದಿರಿಸುತ್ತಿರುವುದಾಗಿ ತಿಳಿಸುತ್ತಾ, ಜುಲೈ 6 ರಂದು ಸಮಿತಿಯವರೊಂದಿಗೆ ಹಿಂದಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರುಗಳು ಹಾಗೂ ಪಂಚಾಯತ್ ರಾಜ್ ಅನುಭವ ಹಾಗೂ ಹಿನ್ನೆಲೆಯುಳ್ಳ ಆಯ್ದ ಶಾಸಕರುಗಳೊಂದಿಗೆ ಪಂಚಾಯತ್ ರಾಜ್ ಬಲವರ್ಧನೆಗೆ ಸಲಹೆ ಪಡೆಯಲು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರು ಈ ವಿಷಯಗಳ ಬಗ್ಗೆ ಕೂಲಂಕುಷವಾಗಿ ಪರಿಶೀಲಿಸಲು ಸಭೆ ಕರೆಯಲು ತಿಳಿಸುತ್ತಾ, ಜುಲೈ 7 ರಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಸಹಾ ಭಾಗವಹಿಸಿ ಇವುಗಳನ್ನು ಅನುಷ್ಠಾನಗೊಳಿಸುವ ಕುರಿತು ಚರ್ಚಿಸುವುದಾಗಿ ಸಭೆಯ ಗಮನಕ್ಕೆ ತಂದರು. ಈ ಪ್ರಮುಖಾಂಶಗಳ ಪೈಕಿ ಯಾವ ವಿಷಯಗಳಿಗೆ ಸರ್ಕಾರಿ ಆದೇಶ ಹೊರಡಿಸಲು ಸಾಧ್ಯವಿದೆಯೋ ಅಂತಹವುಗಳಿಗೆ ಸರ್ಕಾರಿ ಆದೇಶಗಳನ್ನು ಹೊರಡಿಸಲು ಕ್ರಮ ಕೈಗೊಳ್ಳುವುದಾಗಿ ಹಾಗೂ ಯಾವ ವಿಷಯಗಳಿಗೆ ತಿದ್ದುಪಡಿ ಮಾಡಲು ಸಾಧ್ಯವಿದೆಯೋ ಅವುಗಳಿಗೆ ತಿದ್ದುಪಡಿ ಮಾಡಲು ಪರಿಣಿತರ ಸಲಹೆಯನ್ನು ಪಡೆದು ಕ್ರಮ ಕೈಗೊಳ್ಳುವುದಾಗಿ ಸಭೆಯ ಗಮನಕ್ಕೆ ತಂದರು. ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಯ್ಕೆಯನ್ನು ಚುನಾವಣೆ ಫಲಿತಾಂಶ ಪ್ರಕಟವಾದ ದಿನವೇ ಪ್ರಕಟಿಸುವ ವಿಷಯವನ್ನು ಕೂಲಂಕುಷವಾಗಿ ಚರ್ಚೆಗೆ ಬಿಟ್ಟು ನಂತರ ಕ್ರಮ ಕೈಗೊಳ್ಳುವುದಾಗಿ ಸಭೆಯ ಗಮನಕ್ಕೆ ತಂದರು.

ವಂದನಾರ್ಪಣೆಯೊಂದಿಗೆ ಸಭೆಯು ಮುಕ್ತಾಯವಾಯಿತು.

ಸಂಖ್ಯೆ: ಗ್ರಾಅಪ 240 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಇವರಿಗೆ :

1) ಶ್ರೀ ಪ್ರಮೋದ ಹೆಗಡೆ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬೆಂಗಳೂರು.
2) ಶ್ರೀಮತಿ ಉಮಾ ಮಹದೇವನ್, ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3) ಶ್ರೀ ಡಿ.ಆರ್.ಪಾಟೀಲ, ಮಾಜಿ ಶಾಸಕರು ಹಾಗೂ ತಜ್ಞ ಸದಸ್ಯರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಹಾಗೂ ಉಪಾಧ್ಯಕ್ಷರು, ಕರ್ನಾಟಕ ಪಂಚಾಯತ್ ರಾಜ್ ಪರಿಷತ್.
4) ಶ್ರೀ ಸಿ.ನಾರಾಯಣಸ್ವಾಮಿ, ಮಾಜಿ ಸಂಸದರು ಹಾಗೂ ತಜ್ಞ ಸದಸ್ಯರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಹಾಗೂ ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ರಾಜ್ ಪರಿಷತ್.
5) ಶ್ರೀ ವಿ.ವೈ.ಘೋರ್ಪಡೆ, ಉಪಾಧ್ಯಕ್ಷರು, ಕರ್ನಾಟಕ ಪಂಚಾಯತ್ ರಾಜ್ ಪರಿಷತ್, ಬೆಂಗಳೂರು.
6) ಶ್ರೀಮತಿ ವೈಶಾಲಿ ಎಂ.ಎಲ್., ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಶಿವಮೊಗ್ಗ ಜಿಲ್ಲೆ.
7) ಶ್ರೀಮತಿ ಉಮಾ ಡಿ. ಸದಾಶಿವ, ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಶಿವಮೊಗ್ಗ ಜಿಲ್ಲೆ.
8) ಡಾ॥ ಎಸ್.ರಂಗಸ್ವಾಮಿ, ಉಪ ಕಾರ್ಯದರ್ಶಿ (ಆಡಳಿತ), ಜಿಲ್ಲಾ ಪಂಚಾಯತ್, ಶಿವಮೊಗ್ಗ
9) ಶ್ರೀಮತಿ ಜಯಲಕ್ಷ್ಮಿ.ಕೆ., ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್, ಶಿವಮೊಗ್ಗ
10) ಶ್ರೀ ಶಿವರಾಜ್.ಜಿ.ಬಿ., ಉಪಾಧ್ಯಕ್ಷರು, ಗಾಂಧಿ ಸ್ಮಾರಕ ನಿಧಿ, ಗಾಂಧಿ ಭವನ, ಬೆಂಗಳೂರು.
11) ಶ್ರೀ ಎನ್.ಜಯರಾಮ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ವಿಶೇಷ ಕರ್ತವ್ಯಾಧಿಕಾರಿಗಳು, ವಿಧಾನಸೌಧ, ಬೆಂಗಳೂರು.
12) ಶ್ರೀ ಕೆ.ಬಿ.ಆಂಜನಪ್ಪ, ನಿರ್ದೇಶಕರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13) ಶ್ರೀ ಎಂ.ಕೆ.ಕೆಂಪೇಗೌಡ, ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14) ಶ್ರೀ ಕೆ.ಎಸ್.ಸತೀಶ್, ಪ್ರಧಾನ ಕಾರ್ಯದರ್ಶಿ, ಕರ್ನಾಟಕ ಪಂಚಾಯತ್ ರಾಜ್ ಪರಿಷತ್, ಬೆಂಗಳೂರು.
15) ಶ್ರೀ ಹೆಚ್.ವೇಣುಗೋಪಾಲ್, ಸಮಾಲೋಚಕರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.